ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 21ನೇ ಜುಲೈ, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹದಿನೇಳನೇ ಪಟ್ಟಿ
ಆ) ದಿನಾಂಕ 14.07.2015ರ ಹನ್ನೆರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಬಸವರಾಜ್ ನೀಲಪ್ಪ ಶಿವಣ್ಣನವರ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 167(2270)	:	ಮುಖ್ಯಮಂತ್ರಿಯವರು
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹದಿನೇಳನೇ ಪಟ್ಟಿ

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಕಾರ್ಯದರ್ಶಿಯವರು ವಿಧಾನಸಭೆಯಿಂದ ಅಂಗೀಕೃತಗೊಂಡು, ವಿಧಾನ ಪರಿಷತ್ತಿನಿಂದ ತಿರಸ್ಕೃತಗೊಂಡ ರೂಪದಲ್ಲಿರುವ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕ, 2015ನ್ನು ಸಭೆಯ ಮುಂದಿಡುವುದು.

4. ವರದಿಯನ್ನೊಪ್ಪಿಸುವುದು

ಶ್ರೀ ತನ್ವೀರ್ ಸೇಠ್, (ಅಧ್ಯಕ್ಷರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ) ಅವರು:- 2014-15ನೇ ಸಾಲಿನ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೂರನೇ ವರದಿಯನ್ನೊಪ್ಪಿಸುವುದು.

ಪು.ತಿ.ನೋ.,

5. ಶಾಸನ ರಚನೆ

ವಿಧೇಯಕವನ್ನು ಪುನರ್ ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕ, 2015
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು

ಅ) ವಿಧಾನಸಭೆಯಿಂದ ಅಂಗೀಕೃತಗೊಂಡು ವಿಧಾನಪರಿಷತ್ತಿನಿಂದ ತಿರಸ್ಕೃತಗೊಂಡ ರೂಪದಲ್ಲಿರುವ 2015ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ಪುನರ್ ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

6. ಅವಿಶ್ವಾಸ ನಿರ್ಣಯದ ಪ್ರಸ್ತಾವನೆ ಮೇಲೆ ಚರ್ಚೆ

ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ಜನತಾದಳ (ಜಾ) ಶಾಸಕಾಂಗ ಪಕ್ಷದ ನಾಯಕರಾದ ಶ್ರೀ ಹೆಚ್.ಡಿ.ಕುಮಾರಸ್ವಾಮಿ ಮತ್ತು ಇತರರು ನೀಡಿರುವ ಈ ಕೆಳಕಂಡ ಪ್ರಸ್ತಾವದ ಮೇಲೆ ನಡೆದ **ಚರ್ಚೆಗೆ ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು;**

"ಶ್ರೀ ಸಿದ್ದರಾಮಯ್ಯ ಮಾನ್ಯ ಮುಖ್ಯಮಂತ್ರಿಗಳು ಹಾಗೂ ಅವರ ಸಚಿವ ಸಂಪುಟದ ವಿರುದ್ಧ ಅವಿಶ್ವಾಸವನ್ನು ವ್ಯಕ್ತಪಡಿಸುತ್ತದೆ".

7. ವಿತ್ತೀಯ ಕಾರ್ಯಕಲಾಪಗಳು

ಅ) 2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಯ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು:

ಬೇಡಿಕೆ ಸಂಖ್ಯೆ	ಬೇಡಿಕೆಯ ಹೆಸರು
21	ಜಲಸಂಪನ್ಮೂಲ

ಆ) 2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ:

ಬೇಡಿಕೆ ಸಂಖ್ಯೆ	ಬೇಡಿಕೆಗಳ ಹೆಸರು
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಪು.ತಿ.ನೋ.,

18	ವಾಣಿಜ್ಯ ಮತ್ತು ಕೈಗಾರಿಕೆ
24	ಇಂಧನ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು
17	ಶಿಕ್ಷಣ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
14	ಕಂದಾಯ
05	ಒಳಾಡಳಿತ ಮತ್ತು ಸಾರಿಗೆ
16	ವಸತಿ
19	ನಗರಾಭಿವೃದ್ಧಿ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
10	ಸಮಾಜ ಕಲ್ಯಾಣ
15	ಮಾಹಿತಿ ತಂತ್ರಜ್ಞಾನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
13	ಆಹಾರ ಮತ್ತು ನಾಗರೀಕ ಸರಬರಾಜು
06	ಮೂಲಭೂತ ಸೌಕರ್ಯ ಅಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
23	ಕಾರ್ಮಿಕ

8. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಹೆಚ್.ಡಿ.ರೇವಣ್ಣ, ಬಿ.ಬಿ.ನಿಂಗಯ್ಯ, ಡಾ॥ ಉಮೇಶ್ ಜಿ.ಜಾಧವ್, ರಾಜಶೇಖರ ಪಾಟೀಲ್ ಹಾಗೂ ಇತರರು ಮುಂಗಾರು ಮಳೆ ವಿಫಲವಾಗಿರುವುದರಿಂದ ಉಂಟಾಗಿರುವ ಸಮಸ್ಯೆಗಳ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

ಪು.ತಿ.ನೋ.,

2. ಶ್ರೀಯುತರುಗಳಾದ ಹೆಚ್.ಕೆ.ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ಕೆ.ಜಿ.ಬೋಪಯ್ಯ, ವಿಶ್ವೇಶ್ವರ ಹೆಗಡೆ ಕಾಗೇರಿ, ಸಿ.ಟಿ.ರವಿ ಹಾಗೂ ಇತರರು ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ, ಹಾಸನ ಮತ್ತು ಕಾರವಾರ ಜಿಲ್ಲೆಗಳಲ್ಲಿ ಬಿದ್ದ ಭಾರೀ ಮಳೆ ಮತ್ತು ಬಿರುಗಾಳಿಯಿಂದಾಗಿ ಬೆಳೆ ನಾಶವಾಗಿ ರೈತರಿಗೆ ಉಂಟಾಗಿರುವ ನಷ್ಟಕ್ಕೆ ಪರಿಹಾರ ನೀಡಲು ವಿಶೇಷ ಪ್ಯಾಕೇಜ್ ಘೋಷಿಸುವಂತೆ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

9. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಕೆ.ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಆನೆಗಳ ಹಾವಳಿಯಿಂದ ಉಂಟಾಗುತ್ತಿರುವ ಬೆಳೆ ಹಾಗೂ ಪ್ರಾಣ ಹಾನಿ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಸಿ.ಟಿ. ರವಿ ಅವರು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವು ರೇಷ್ಮೆ ನೂಲಿನ ಖರೀದಿಗಾಗಿ ಕರೆದಿದ್ದ ಇ-ಟೆಂಡರಿನಲ್ಲಿ ಅವ್ಯವಹಾರ ಎಸಗಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

3. ಶ್ರೀ ಎಂ. ಸತೀಶ್ ರೆಡ್ಡಿ ಅವರು ಬೆಂಗಳೂರಿನ ಸೋಮಸಂದ್ರ ಪಾಳ್ಯ, ಹೆಚ್.ಎಸ್.ಆರ್ ಲೇಔಟ್‌ನಲ್ಲಿರುವ ಕೆ.ಸಿ.ಡಿ.ಸಿ. ಗೊಬ್ಬರ ಕಾರ್ಖಾನೆಯಲ್ಲಿ ಬಾಲಕ ಮೃತಪಟ್ಟಿರುವ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ಮೃತರ ಕುಟುಂಬಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಸಾ.ರಾ. ಮಹೇಶ್ ಅವರು ತುಮಕೂರಿನ ಸಿದ್ಧಗಂಗಾ ಮಠದ ಶ್ರೀಗಳಾದ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳಿಗೆ ಭಾರತ ರತ್ನ ಪ್ರಶಸ್ತಿ ನೀಡಲು ಶಿಫಾರಸ್ಸು ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5. ಶ್ರೀ ಜಿ.ಹೆಚ್. ಶ್ರೀನಿವಾಸ ಅವರು ತರಿಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಭದ್ರಾ ಜಲಾಶಯದ ಮುಂಭಾಗದಲ್ಲಿ ಕೆ.ಆರ್.ಎಸ್. ಮಾದರಿಯಲ್ಲಿ ಬೃಂದಾವನವನ್ನು ನಿರ್ಮಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜು ಮತ್ತು ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜುಗಳಲ್ಲಿ ಕೊಠಡಿಗಳ ಮತ್ತು ಸಿಬ್ಬಂದಿಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

7. ಶ್ರೀ ಪ್ರತಾಪಗೌಡ ಪಾಟೀಲ್ ಅವರು ಮಸ್ಕಿ ವಿಧಾನಸಭಾ ಕ್ಷೇತ್ರದ ಸಿಂಧನೂರು ತಾಲ್ಲೂಕಿನ ದುರ್ಗಾ ಕ್ಯಾಂಪಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದ ಕೃಷಿ ಕಾರ್ಮಿಕನ ಕುಟುಂಬಕ್ಕೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

8. ಶ್ರೀ ಕೆ.ಎಂ. ಶಿವಲಿಂಗೇಗೌಡ ಅವರು ನಿರಂತರ ಜ್ಯೋತಿ ಯೋಜನೆಯ ಕಳಪೆ ಕಾಮಗಾರಿಯಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

9. ಶ್ರೀ ಬಿ. ಸುರೇಶಗೌಡ ಅವರು ತುಮಕೂರು ಗ್ರಾಮಾಂತರ ಹೆಬ್ಬೂರು ಹೋಬಳಿ ಕೇಂದ್ರದಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕಾರ್ಮಿಕ ರಾಜ್ಯ ಸಚಿವರ ಗಮನ ಸೆಳೆಯುವುದು.

10. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಅಂಬಳಿ, ಲಕ್ಯಾ, ಮತ್ತು ಸಖರಾಯಪಟ್ಟಣ ಹೋಬಳಿಗಳನ್ನು ಎಸ್.ಡಿ.ಪಿ ಯೋಜನೆಗೆ ಸೇರ್ಪಡಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11. ಶ್ರೀ ಸಿ.ಎಸ್. ಶಿವಳ್ಳಿ ಅವರು ಕುಂದಗೋಳ ತಾಲ್ಲೂಕನ್ನು ಬರಗಾಲ ಪ್ರದೇಶವೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ವಿಶ್ವನಾಥ (ಆನಂದ) ಚಂದ್ರಶೇಖರ ಮಾಮನಿ ಅವರು ರಾಜ್ಯದ ಅಧಿಸೂಚಿತ ಸಂಸ್ಥೆ/ದೇವಸ್ಥಾನಗಳ ವ್ಯವಸ್ಥಾಪನ ಸಮಿತಿಯ ಬದಲಿಗೆ ಆಡಳಿತಾಧಿಕಾರಿಯನ್ನು ನೇಮಿಸಿ ಧಾರ್ಮಿಕ ಪರಿಷತ್ತು ಹೊರಡಿಸಿರುವ ಆದೇಶಕ್ಕೆ ಕರ್ನಾಟಕ ಉಚ್ಛನ್ಯಾಯಾಲಯ ತಡೆಯಾಜ್ಞೆ ನೀಡಿರುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

13. ಶ್ರೀ ಹೆಚ್.ಡಿ.ರೇವಣ್ಣ ಅವರು ಹೇಮಾವತಿ ಜಲಾಶಯ ಯೋಜನೆ ಗೊರೂರು ವ್ಯಾಪ್ತಿಯ ವಿಭಾಗಗಳಲ್ಲಿ 2015-16ನೇ ಸಾಲಿನ ಕಾರ್ಯಕ್ರಮದ ಪಟ್ಟಿಯ ರೀತ್ಯಾ ಕ್ರಿಯಾಯೋಜನೆ ತಯಾರಾಗದಿರುವುದರಿಂದ ಟೆಂಡರ್ ಪ್ರಕ್ರಿಯೆ ವಿಳಂಬವಾಗಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

14. ಶ್ರೀ ಎಸ್.ಭೀಮಾನಾಯ್ಕ ಅವರು ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿರುವ ಹಲವಾರು ಗ್ರಾಮಗಳಿಗೆ ಕುಡಿಯುವ ನೀರನ್ನು ಪೂರೈಸಲು ಏತ ನೀರಾವರಿ ಯೋಜನೆಯಡಿ ಮಾಲ್ವಿ ಜಲಾಶಯಕ್ಕೆ ನೀರು ಹರಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

15. ಶ್ರೀ ನಾರಾಯಣಗೌಡ ಅವರು ಕೆ.ಆರ್.ಪೇಟೆ ತಾಲ್ಲೂಕಿನ ಅಕ್ಕಿಹೆಬ್ಬಾಳು ಸಾರ್ವಜನಿಕ ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾಮಗಾರಿಯು ಪೂರ್ಣಗೊಳ್ಳದಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

16. ಶ್ರೀ ಹೆಚ್.ಆರ್.ಅಲಗೂರು (ರಾಜು) ಅವರು ಬೌದ್ಧ ಧರ್ಮಕ್ಕೆ ಮತಾಂತರ ಹೊಂದಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡದಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

17. ಶ್ರೀ ಎ.ಮಂಜು ಅವರು 2013ರ ಭೂಸ್ವಾಧೀನ ಕಾಯ್ದೆ ಅಡಿಯಲ್ಲಿ ಪರಿಸರ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆಯುವ ಅವಶ್ಯಕತೆ ಇರದ ಪ್ರಸ್ತಾವನೆಗಳಿಗೆ ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಗೊಳ್ಳಲು ನಿರ್ದೇಶನ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

18. ಶ್ರೀ ಪಿ.ಆರ್.ಸುಧಾಕರಲಾಲ್ ಅವರು ಕೊರಟಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮಧುಗಿರಿ ತಾಲ್ಲೂಕಿನ ಪುರವರ ಹೋಬಳಿ ಕೇಂದ್ರದಲ್ಲಿ ಉಪ ಪೊಲೀಸ್ ಠಾಣೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

19. ಶ್ರೀ ಹೆಚ್.ಎಸ್.ಶಿವಶಂಕರ ಅವರು ಹರಿಹರ ತಾಲ್ಲೂಕಿನ ಮಲೆಬೆನ್ನೂರಿನಲ್ಲಿ ಪ್ರಥಮ ದರ್ಜೆ ಕಾಲೇಜು ಇಲ್ಲದೆ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

20. ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಅವರು ಮಾಗಡಿ ತಾಲ್ಲೂಕಿನ ಹುಲಿಕಲ್‌ನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

21. ಶ್ರೀ ಜೆ.ಟಿ.ಪಾಟೀಲ್ ಅವರು ದೆಹಲಿಯ ಅಕ್ಷರಧಾಮ ಮಾದರಿಯಲ್ಲಿ ಕೂಡಲಸಂಗಮ ಹಾಗೂ ಚಿಕ್ಕಸಂಗಮವನ್ನು ಅಭಿವೃದ್ಧಿಪಡಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

22. ಶ್ರೀ ರಮೇಶ್ ಬಾಳಪ್ಪ ಭೂಸನೂರು ಅವರು ವಿಜಯಪುರ ಜಿಲ್ಲೆ ಸಿಂಧಗಿ ಪಟ್ಟಣದಲ್ಲಿ ಕುಡಿಯುವ ನೀರು ಸರಬರಾಜು ಮಾಡುವ ಕೆರೆಯು ಸಂಪೂರ್ಣ ಬತ್ತಿ ಹೋಗಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

23. ಶ್ರೀ ವಿ. ಸುನೀಲ್‌ಕುಮಾರ್ ಅವರು ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ಹೆಬ್ರಿ ಮತ್ತು ನಿಟ್ಟೆ ಗ್ರಾಮ ಪಂಚಾಯತ್‌ಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯ ಎರಡನೇ ಹಂತದ ಕಾಮಗಾರಿ ಪ್ರಾರಂಭವಾಗದೆ ನಿರುಪಯುಕ್ತವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

24. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು 2015ರ ಏಪ್ರಿಲ್‌ನಲ್ಲಿ ನಡೆದ ಕೆ.ಎ.ಎಸ್. ಪರೀಕ್ಷೆಯಲ್ಲಿ ಉತ್ತೀರ್ಣರಾದ ಉತ್ತರ ಕರ್ನಾಟಕ ಹಾಗೂ ಹೈದ್ರಾಬಾದ್-ಕರ್ನಾಟಕ ಭಾಗದ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಧಾರವಾಡದಲ್ಲಿ ಮುಖ್ಯ ಪರೀಕ್ಷೆಗೆ ಹಾಜರಾಗಲು ಉಚಿತ ತರಬೇತಿ. ಊಟ. ವಸತಿ ಮತ್ತು ಸಾರಿಗೆ ಸೌಲಭ್ಯವನ್ನು ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

25. ಡಾ॥ ಗುರುಪಾದಪ್ಪ ನಾಗಮಾರಪಳ್ಳಿ ಅವರು ಬೀದರ್ ಜಿಲ್ಲೆಯಲ್ಲಿನ ಅನಾವೃಷ್ಟಿಯಿಂದ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

26. ಡಾ॥ ಕೆ.ಸುಧಾಕರ್ ಅವರು ಚಿಕ್ಕಬಳ್ಳಾಪುರ ತಾಲ್ಲೂಕಿನ ಕಸಬಾ ಹೋಬಳಿ ಅಥವಾ ನಂದಿ ಹೋಬಳಿಯಲ್ಲಿ ಕೈಗಾರಿಕಾ ವಲಯ ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

27. ಶ್ರೀ ಕೆ.ಗೋಪಾಲ ಪೂಜಾರಿ ಅವರು ಕುಂದಾಪುರ ತಾಲ್ಲೂಕು ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗುಜ್ಜಾಡಿ ಬ್ಲಾಕ್ ಮೀಸಲು ಅರಣ್ಯದ ಹೊಸಾಡು ಗ್ರಾಮದ ಸರ್ವೆ ನಂ. 120. 180ರಲ್ಲಿ 33/11 ಕೆ.ವಿ.ವಿದ್ಯುತ್ ಪ್ರಸರಣ ಮಾರ್ಗ ನಿರ್ಮಾಣ ವಿಳಂಬವಾಗಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

28. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ಮತ್ತು ಮುದ್ದೇಬಿಹಾಳ ತಾಲ್ಲೂಕುಗಳ ರೈತರಿಗೆ ಈರುಳ್ಳಿ ಗೋದಾಮು ನಿರ್ಮಿಸಲು ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯಿಂದ ನೀಡಲಾಗಿರುವ ಸಾಲವನ್ನು ಮನ್ನಾ ಮಾಡುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

29. ಶ್ರೀ ಪಿಳ್ಳಮುನಿಶಾಮಪ್ಪ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ನಿಯಮ 197(ಬಿ) ಮತ್ತು (ಸಿ) ಪ್ರಕಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ಬರುವ ಅಧಿಕಾರಿ ಸಿಬ್ಬಂದಿಗಳು ಕರ್ತವ್ಯ ನಿರ್ವಹಣೆಯಲ್ಲಿ ವಿಫಲವಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

30. ಶ್ರೀ ಗೋವಿಂದ ಎಂ.ಕಾರಜೋಳ ಅವರು ರಾಜ್ಯ ಉಚ್ಚನ್ಯಾಯಾಲಯದ ಏಕ ಸದಸ್ಯ ಪೀಠದ ಆದೇಶದನ್ವಯ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳಿಗೆ ಬಡ್ತಿ ಹಾಗೂ ಜೇಷ್ಠತೆಯನ್ನು ಮರುನಿಗದಿಗೊಳಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

10. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಆರ್. ವಿ. ದೇವರಾಜ್ ಅವರು "ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದಲ್ಲಿನ ಕಲಾಸಿಪಾಳ್ಯದಲ್ಲಿ ಸುಸಜ್ಜಿತ ಬಸ್ ನಿಲ್ದಾಣ ನಿರ್ಮಿಸುವ" ಬಗ್ಗೆ ದಿನಾಂಕ: 15.07.2015ರಂದು ಸದನದಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ಸಿ.ಟಿ.ರವಿ ಅವರು "ಕ್ಯಾಲ್ಸಿಯಂ ಕಾರ್ಬೈಡ್ ರಾಸಾಯನಿಕ ಬಳಸುವ" ಬಗ್ಗೆ ದಿನಾಂಕ: 17.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 213(1509)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು "ಕೃಷಿ ಭಾಗ್ಯ ಯೋಜನೆಯ ಅನುಷ್ಠಾನ"ದ ಬಗ್ಗೆ ದಿನಾಂಕ: 17.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 215(3419)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4. ಶ್ರೀ ಹೆಚ್.ಸಿ.ಬಾಲಕೃಷ್ಣ ಅವರು "ಕೃಷಿ ಪತ್ತಿನ ಸಹಕಾರ ಸಂಘಗಳ" ಬಗ್ಗೆ ದಿನಾಂಕ: 17.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 211(2251)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5. ಶ್ರೀ ಪಿಳ್ಳಮುನಿಶಾಮಪ್ಪ ಅವರು ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವಿಜಯಪುರದ ಬೈರಾಪುರ ಗ್ರಾಮದಲ್ಲಿರುವ "ಆಗ್ರೋ ಸಿಂಥ್ ಕೆಮಿಕಲ್" ಕಾರ್ಖಾನೆಯನ್ನು ರೆಡ್ ಇಂಡಸ್ಟ್ರೀ ಎಂದು ಘೋಷಿಸಿದ್ದರೂ. ಈ ಕಾರ್ಖಾನೆಯನ್ನು ಮುಚ್ಚದೇ ಇರುವ ಬಗ್ಗೆ ದಿನಾಂಕ: 14.07.2015ರಂದು ಸದನದಲ್ಲಿ ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

6. ಶ್ರೀ ಆರ್. ಅಶೋಕ್ ಅವರು "ವಾಯುಮಾಲಿನ್ಯ ತಡೆಗೆ ಕ್ರಮ" ಬಗ್ಗೆ ದಿನಾಂಕ: 20.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನಾರನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 226(1444)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Nagouda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)